ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ
ಸಿ.ಸಿ.192/2024

| | | |
|---|---|---|
| ಸಾಕ್ಷಿದಾರರ ಹೆಸರು | : ರಾಮ | ಫ್ರಾಸಾ -1 |
| ತಂದೆಯ ಹೆಸರು | : ಕರಿಯ | ಚಾಸಾ-1 |
| ವಯಸ್ಸು | : 67 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ14.02.2025 |
| ವಾಸಸ್ಥಳ | : ಕೆಂಜಿಗೆ | |

:ಮುಖ್ಯ ವಿಚಾರಣೆ ಫ್ರಾಜ್ಞ್ಯಾ.ಸ.ಸ.ಅ. ರವರಿಂದ:

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಮೃತ ಮಂಜುನಾಥ ರವರು ನನ್ನ ಮಗ.

ಸಾಕ್ಷಿಯು ದಿ.13.11.2023 ರ ಹೇಳಿಕೆಯಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು ಸದರಿ ಹೇಳಿಕೆಯನ್ನು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸುಮಾರು 1 ½ ವರ್ಷದ ಹಿಂದೆ ನಾನು ಮತ್ತು ನನ್ನ ಮಗ ಮಂಜುನಾಥ್ ಅವರ ಬೈಕ್ ನಲ್ಲಿ ನನ್ನ ಮೊಮ್ಮಗು ತಿಥಿ ಕಾರ್ಯಕ್ಕೆಂದು ಹಾನಬಾಳ್ ಗೆ ಹೋಗಿ ವಾಪಸ್ಸು ಮನೆಗೆ ಬರುತ್ತಿರುವಾಗ ಬಿದರಹಳ್ಳಿ ಬಳಿ ನಮಗೆ ಅಪಘಾತವಾಯಿತು. ನಾನು ಮತ್ತು ನನ್ನ ಮಗ ಬೈಕ್ ನಿಂದ ಕೆಳಗೆ ಬಿದ್ದು ತಲೆಗೆಯ ಎಡಭಾಗ ಮತ್ತು ಎಡಕಾಲಿನ ಮಂಡಿಗೆ ಗಾಯವಾಯಿತು. ನನ್ನ ಮಗ ಸ್ವಲ್ಪ ದೂರದಲ್ಲಿ ಬಿದ್ದಿದ್ದರು. ಯಾರೋ ನಮ್ಮನ್ನು ಮೂಡಿಗೆರೆ ಆಸ್ಪತ್ರೆಗೆ ಕರೆದುಕೊಂಡು ಬಂದರು. ನನ್ನ ಮಗ ಸ್ಥಳದಲ್ಲಿಯೇ ಮೃತಪಟ್ಟಿದ್ದರು ಎಂದು ತಿಳಿಯಿತು. ನಮ್ಮ ಬೈಕಿನ ಹಿಂಬದಿಯಿಂದ ಬಂದ ಲಾರಿ ನಮಗೆ ಗುದ್ದಿಸಿದ ಕಾರಣ ನಮಗೆ ಅಪಘಾತವಾಯಿತು. ಲಾರಿಯನ್ನು ಯಾರು ಚಲಾಯಿಸುತ್ತಿದ್ದರು ಮತ್ತು ಲಾರಿಯ ಸಂಖ್ಯೆ ನನಗೆ ಗೊತ್ತಿಲ್ಲ. ನಾನು ಆಸ್ಪತ್ರೆಯಲ್ಲಿ ಇದ್ದಾಗ ಪೋಲಿಸರು ನನ್ನ ಹೇಳಿಕೆ ಪಡೆದಿದ್ದು ಮೇಲೆ ಹೇಳಿದ ವಿಚಾರವನ್ನಷ್ಟೇ ನಾನು ಪೋಲಿಸರಿಗೆ ಹೇಳಿದ್ದೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

ಪಾಟೀ ಸವಾಲು: ಫ್ರಾಜ್ಞ್ಯಾಸ.ಸ.ಅ. ರವರಿಂದ:

ದಿ.13.11.2023 ರಂದು ರಾ.9.45 ರ ಸಮಯಕ್ಕೆ ಅಪಘಾತವಾಯಿತು ಎಂದರೆ ನನಗೆ ಗೊತ್ತಿಲ್ಲ. ಲಾರಿಯ ನೋ.ಸಂ.KA-42-5959 ಎಂದರೆ ನನಗೆ ಗೊತ್ತಿಲ್ಲ. ಸದರಿ ಲಾರಿಯನ್ನು ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿಯೇ ಅತೀವೇಗ ಮತ್ತು ಅಜಾಗುರುಕತೆಯಿಂದ ಚಲಾಯಿಸಿಕೊಂಡು ನಮಗೆ ಡಿಕ್ಕಿ ಪಡಿಸಿದ್ದಾರೆ ಎಂದರೆ ಸರಿಯಲ್ಲ. ನನ್ನ ಮಗನ ಬೈಕ್ ಸಂ.KA-13-EF-1994 ಎಂದರೆ ನನಗೆ ಗೊತ್ತಿಲ್ಲ.

ನನಗೆ ಪ್ರಕರಣದ ಮಾಹಿತಿ ಗೊತ್ತಿದ್ದರೂ ಸಹಾ ಆರೋಪಿಯೊಂದಿಗೆ ರಾಜೀ ಮಾಡಿಕೊಂಡು ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.